# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **2410 (2056)** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಕೆ. ಅಬ್ದುಲ್ ಜಬ್ಬರ್** |
| **ಉತ್ತರಿಸಬೇಕಾದ ದಿನಾಂಕ** | **27 /03/2026** |
| **ಉತ್ತರಿಸುವವರು** | **ಮಾನ್ಯ ಕಾರ್ಮಿಕ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ನಿರುದ್ಯೋಗದ ಪ್ರಮಾಣ ಎಷ್ಟು; ಕಳೆದ ಮೂರು ವರ್ಷಗಳ ಅಂಕಿ-ಅಂಶಗಳನ್ನು ಒದಗಿಸುವುದು; | ಈ ವಿಷಯವು ಕಾರ್ಮಿಕ ಇಲಾಖೆಗೆ ಸಂಬಂಧಿಸಿರುವುದಿಲ್ಲ. |
| ಆ) | ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿಗಾಗಿ ಕೈಗೊಂಡಿರುವ ಕ್ರಮಗಳೇನು: (ಸಂಪೂರ್ಣ ಮಾಹಿತಿ ಒದಗಿಸುವುದು) | **<u>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ-(ಕೆ.ಎಸ್.ಡಿ.ಸಿ)</u>**<br><br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಗ್ರಾಮೀಣ ಮತ್ತು ನಗರ ಪ್ರದೇಶಗಳನ್ನು ಒಳಗೊಂಡಂತೆ ನಿರುದ್ಯೋಗಿಗಳನ್ನು ಕೌಶಲ್ಯಾಭಿವೃದ್ಧಿಗೊಳಿಸಿ, ಉದ್ಯೋಗಕ್ಕಾಗಿ ಸಜ್ಜುಗೊಳಿಸಲು ಈ ಕೆಳಕಂಡ ಎರಡು ಪ್ರಮುಖ ಯೋಜನೆಗಳಡಿಯಲ್ಲಿ ತರಬೇತಿಗಳನ್ನು ನೀಡಲಾಗುತಿದೆ.<br><br>I. **<u>ರಾಜ್ಯ ಸರ್ಕಾರದ ಯೋಜನೆ</u>** :<br><br>**1.<u>ಸಿ.ಎಂ.ಕೆ.ಕೆ.ವೈ</u>** : ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ರಾಜ್ಯದ ವಿವಿಧ ಸರ್ಕಾರಿ ಹಾಗೂ ಖಾಸಗಿ ತರಬೇತಿದಾರ ಸಂಸ್ಥೆಗಳ ಮುಖೇನ ವಿವಿಧ ವೃತ್ತಿಗಳಲ್ಲಿ ಅಲ್ಪಾವಧಿ ಕೌಶಲ್ಯ ತರಬೇತಿ ನೀಡಲಾಗುತ್ತಿದೆ.<br><br>• **<u>ಕೌಶಲ್ಯನೀತಿ</u>** :ಕೌಶಲ್ಯಾಭಿವೃದ್ಧಿಯ ಪ್ರಕ್ರಿಯೆಗಳನ್ನು ಏಕರೂಪಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಭಾಗಿದಾರರನ್ನು ಒಳಗೊಂಡಂತೆ ನೀತಿಯನ್ನು ರೂಪಿಸಲಾಗಿದೆ.<br><br>• **<u>ಸಿ.ಎಂ.ಕೆ.ಕೆ.ವೈ2.0</u>**: ಯೋಜನೆಯನ್ನು ಪರಿಣಾಮಕಾರಿಯಾಗಿ ಹಾಗೂ ತ್ವರಿತವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಆಯವ್ಯಯ ಘೋಷಣೆಯಂತೆ ಕ್ರಮವಹಿಸಲಾಗುತ್ತಿದೆ. |

- **Industry Linkage Cell ಮತ್ತು Future Skills** :ಯುವಕರಿಗೆ ಭವಿಷ್ಯದ ಕೌಶಲ್ಯ (Future Skills) ತರಬೇತಿಗಳನ್ನು ಕೈಗಾರಿಕಾ ಆಧಾರಿತ ಬೇಡಿಕೆ ಅನುಸಾರ ನೀಡುವುದು ಹಾಗೂ ಉದ್ಯೋಗಾವಕಾಶ ಒದಗಿಸುವುದು.
- **ಕರ್ನಾಟಕ ಸ್ಕಿಲ್ ಒಲಂಪಿಕ್ಸ್** :ಅಂತರಾಷ್ಟ್ರೀಯ ಕೌಶಲ್ಯ ಸ್ಪರ್ಧೆಗೆ ಹಾಗೂ ರಾಷ್ಟ್ರೀಯ ಕೌಶಲ್ಯ ಸ್ಪರ್ಧೆಗೆ ಪೂರಕವಾಗಿ ಕೌಶಲ್ಯ ಒಲಂಪಿಕ್ಸ್ ಮೂಲಕ ರಾಜ್ಯದ ಯುವ ಜನತೆಗೆ ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರೇರೇಪಿಸುವುದು.
- **ವಿದೇಶಿ ಭಾಷಾ ತರಬೇತಿ** :ಅಂತರಾಷ್ಟ್ರೀಯ ಮಟ್ಟದಲ್ಲಿ ವಿವಿಧ ಉದ್ಯೋಗಾವಕಾಶಗಳನ್ನು ಪಡೆಯಲು ಜರ್ಮನ್, ಇಂಗ್ಲೀಷ್, ಸ್ಪ್ಯಾನಿಷ್ ಹಾಗೂ ಇತರೆ ಭಾಷೆಗಳಲ್ಲಿ ತರಬೇತಿ ನೀಡಲು ಕ್ರಮವಹಿಸಲಾಗುತ್ತಿದೆ.
- **ಕಲಿಕೆ ಜೊತೆ ಕೌಶಲ್ಯ** :ಪದವಿ ತರಗತಿಗಳಲ್ಲಿ ಕೌಶಲ್ಯ ಸುಧಾರಿತ ಕಲಿಕೆ ಜೊತೆ ಕೌಶಲ್ಯ ಕಾರ್ಯಕ್ರಮದಡಿ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ 50 ಗಂಟೆಗಳ ಕೈಗಾರಿಕಾ ಆಧಾರಿತ ತರಬೇತಿ ನೀಡಲಾಗುತ್ತಿದೆ.
- **ಉದ್ಯೋಗ ಮೇಳ** :ರಾಜ್ಯ ವಿವಿಧ ಜಿಲ್ಲೆಗಳಲ್ಲಿ ಉದ್ಯೋಗ ಮೇಳ ಆಯೋಜಿಸುವ ಮುಖೇನ ಒಂದೇ ವೇದಿಕೆಯಡಿ ಉದ್ಯೋಗದಾತರನ್ನು ಹಾಗೂ ಉದ್ಯೋಗಾಕಾಂಕ್ಷಿಗಳನ್ನು ಒಟ್ಟುಗೂಡಿಸಿ, ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಕ್ರಮವಹಿಸಲಾಗಿದೆ.
- **ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯ ತರಬೇತಿ ಕಾರ್ಯಕ್ರಮ**: ಪ್ರಸಕ್ತ ಸಾಲಿನ ಆಯವ್ಯಯ ಘೋಷಣೆಯಂತೆ ಅಳಿವಿನಂಚಿನಲ್ಲಿರುವ ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸಲು ಅಗತ್ಯವಿರುವ ಟೂಲ್‌ಕಿಟ್‌ಗಳೊಂದಿಗೆ ಅಲ್ಪಾವಧಿ ತರಬೇತಿಯನ್ನು ನೀಡಲು ಕ್ರಮವಹಿಸಲಾಗಿದೆ.
- **ಲಂಬಾಣಿ ಜನಾಂಗದ ಕಸೂತಿ ಕಲೆಯ ಕೌಶಲ್ಯ ತರಬೇತಿ ಕಾರ್ಯಕ್ರಮ:** ಪ್ರಸಕ್ತ ಸಾಲಿನ ಆಯವ್ಯಯ ಘೋಷಣೆಯಂತೆ ಲಂಬಾಣಿ ಜನಾಂಗದಕ ಸೂತಿ ಕಲೆಯ ಬಗ್ಗೆ ತರಬೇತಿಯನ್ನು ಕೌಶಲ್ಯ ತರಬೇತಿ ಕೇಂದ್ರಗಳ ಮುಖೇನ ಅನುಷ್ಠಾನಗೊಳಿಸಲಾಗುತ್ತಿದೆ.

**<u>ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಗಳು</u>**:

**1. ಪಿ.ಎಂ.ಕೆ.ವಿ.ವೈ** : ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸಯೋಜನೆ 4.0 ರಡಿ

- STT – Short term Training ಮುಖೇನ ಅಭ್ಯರ್ಥಿಗಳಿಗೆ ಅಲ್ಪಾವಧಿ ಕೌಶಲ್ಯಾಧಾರಿತ ತರಬೇತಿ ನೀಡಿ ಉದ್ಯೋಗಕ್ಕೆ ಸಜ್ಜುಗೊಳಿಸುವುದು.
- RPL – Recognition of prior learning ಮುಖೇನ ಈಗಾಗಲೇ ವಿವಿಧ ಕೌಶಲ್ಯಗಳನ್ನು ಹೊಂದಿರುವವರಿಗೆ ಅಲ್ಪಾವಧಿ ತರಬೇತಿ ನೀಡಿ, ತರಬೇತಿ ಪಡೆದವರಿಗೆ ಪ್ರಮಾಣ ಪತ್ರ ನೀಡಿ, ಹುದ್ದೆಗಳಿಗೆ ನೇಮಕಾತಿ ಹೊಂದಲು ಅನುವು ಮಾಡಿಕೊಡುವುದು.

**<u>2. ನಲ್ ಜಲ್ ಮಿತ್ರಯೋಜನೆ</u>** : ಗ್ರಾಮೀಣ ಭಾಗದ SHG ಗುಂಪಿನ ಮಹಿಳೆಯರಿಗೆ ಗ್ರಾಮೀಣ ಕುಡಿಯುವ ನೀರು ನಿರ್ವಹಣೆಯಡಿ Plumbing Job role ಅಡಿಟೂಲ್ ಕಿಟ್ ನೊಂದಿಗೆ ಕೌಶಲ್ಯಾಧಾರಿತ ತರಬೇತಿ ನೀಡುವುದು.

**<u>ರಾಷ್ಟ್ರೀಯ ಜೀವನೋಪಾಯ ಅಭಿಯಾನ</u>**
**<u>ದೀನ್ ದಯಾಳ್ ಅಂತ್ಯೋದಯ ನಗರ</u>**
**<u>ಜೀವನೋಪಾಯ ಅಭಿಯಾನ (DAY-NULM)</u>**

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ ರವರ ಪತ್ರ ಸಂಖ್ಯೆ: K-12014(21)/1/2018-UPA-I-UD (E-9044566) ದಿನಾಂಕ: 03.04.2023 ರನ್ವಯ ಡೇ-ಎನ್‌ಯುಎಲ್‌ಎಂ ಅಭಿಯಾನದ ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ವಳನಿಯುಕ್ತಿ ಉಪಘಟಕವನ್ನು ಮುಕ್ತಾಯಗೊಳಿಸಿ ಆದೇಶಿಸಿರುತ್ತಾರೆ.

- ಡೇ-ಎನ್‌ಯುಎಲ್‌ಎಂ ಯೋಜನೆಯು ದಿನಾಂಕ: 30.09.2024 ರ ಅಂತ್ಯಕ್ಕೆ ಮುಕ್ತಾಯಗೊಂಡಿರುತ್ತದೆ. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ ರವರ ಪತ್ರ ಸಂಖ್ಯೆ: K-11013(8) /1/2021-UPA-I-UD-Part(1)/E-9126071 ದಿನಾಂಕ:04.12.2024 ರನ್ವಯ ಹೊಸ ಯೋಜನೆಯಾದ ದೀನದಯಾಳ್ ಜನ್ ಆಜೀವಿಕ (ಶಹರಿ) ಯೋಜನೆಯನ್ನು (DJAY-S) ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಅನುಮೋದನೆಯನ್ನು ನೀಡಿರುತ್ತದೆ. ಸದರಿ ಯೋಜನೆಯನ್ನು ದಿನಾಂಕ:30.09.2025 ರವರೆಗೆ ಮುಂದುವರೆಸಲಾಗಿರುತ್ತದೆ.

- ಅದರಂತೆ ಕೇಂದ್ರ ಸರ್ಕಾರದಿಂದ ಕರಡು ಮಾರ್ಗಸೂಚಿಯು ಮಾತ್ರ ಸ್ವೀಕೃತವಾಗಿದ್ದು, ಅನುದಾನ ಮತ್ತು ಭೌತಿಕ ಗುರಿ ಸ್ವೀಕೃತವಾಗಿರುವುದಿಲ್ಲ.

ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ ಮೊದಲನೇ ಹಂತ ರೂ.15,000/- ಎರಡನೇ ಹಂತ ರೂ. 25,000/- ಮತ್ತು ಮೂರನೇ ಹಂತ ರೂ. 50,000/- ಗಳವರೆಗೆ ಶೇ. 7 ರಷ್ಟು ಬಡ್ಡಿ ಸಹಾಯ ಧನದೊಂದಿಗೆ ಕಿರು ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದೆ.

**<u>ಸಂಜೀವಿನಿ- ಕೆಎಸ್‌ಆರ್‌ಎಲ್ ಪಿಎ ಸ್ಸಂಸ್ಥೆ / ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY- NRLM)</u>**

ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ ಅಡಿಯಲ್ಲಿ ಬರುವ ಸಂಜೀವಿನಿ-ಕೆ.ಎಸ್.ಆರ್.ಎಲ್.ಪಿ.ಎಸ್ ಸಂಸ್ಥೆಯ ಮೂಲಕ ಗ್ರಾಮೀಣ ನಿರುದ್ಯೋಗಿಗಳಿಗೆ ಉದ್ಯೋಗ ಒದಗಿಸಲು ಈ ಕೆಳಗಿನ ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿರುತ್ತದೆ.

1. **<u>ದೀನದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯಯೋಜನೆ (DDU-GKY)</u>** ಯಡಿ ಗ್ರಾಮಾಂತರ ಪ್ರದೇಶದಲ್ಲಿನ 18 ರಿಂದ 35 ವಯೋಮಾನದ ನಿರುದ್ಯೋಗಿ ಯುವಕ/ಯುವತಿಯರಿಗೆ ವಿವಿಧ ಕೌಶಲ್ಯ ವಿವಿಧ ತರಬೇತಿಗಳನ್ನು ನೀಡಿ ವೇತನಾಧಾರಿತ ಉದ್ಯೋಗ ಕಲ್ಪಿಸಲಾಗುತ್ತಿದೆ.

- ಡಿಡಿಯು-ಜಿಕೆವೈ ಕಾರ್ಯಕ್ರಮದಡಿ ವಸತಿ ಸಹಿತ ಮತ್ತು ವಸತಿ ರಹಿತ ವಿವಿಧ ಕೌಶಲ್ಯಾಧಾರಿತ ತರಬೇತಿಗಳನ್ನು ಉಚಿತವಾಗಿ ಯೋಜನಾ ಅನುಷ್ಠಾನ ಸಂಸ್ಥೆಗಳ ಮೂಲಕ ಒದಗಿಸಲಾಗುತ್ತಿದೆ. ತರಬೇತಿ ಪೂರ್ಣಗೊಳಿಸಿರುವ ಅಭ್ಯರ್ಥಿಗಳಿಗೆ ಡಿಡಿಯು-ಜಿಕೆವೈ ಮಾರ್ಗಸೂಚಿಗಳಂತೆ ಯೋಜನಾ ಅನುಷ್ಠಾನ ಸಂಸ್ಥೆಗಳ ಮೂಲಕ ವೇತನಾಧಾರಿತ ಉದ್ಯೋಗಾವಕಾಶವನ್ನು ಒದಗಿಸಲಾಗುತ್ತಿದೆ. ಅಭ್ಯರ್ಥಿಗಳು ಉದ್ಯೋಗಕ್ಕೆ ಸೇರ್ಪಡೆಗೊಂಡ 6 ತಿಂಗಳವರೆಗೆ ಅನುಸರಣೆ ಮಾಡುವ ಮೂಲಕ ನಿರುದ್ಯೋಗ ಯುವಕರು ಉದ್ಯೋಗ ಹೊಂದಲು ಕ್ರಮವಹಿಸಲಾಗುತ್ತಿದೆ.

| | | |
|---|---|---|
| | | • ಮುಂದುವರೆದು, ಜಿಲ್ಲೆಗಳಲ್ಲಿ ಉದ್ಯೋಗ ಮೇಳಗಳನ್ನು ಆಯೋಜಿಸಿ ತರಬೇತಿ ಹೊಂದಿದ ಯುವಕ/ಯುವತಿಯರಿಗೆ ಉದ್ಯೋಗ ಒದಗಿಸಲಾಗುತ್ತಿದೆ.<br><br>• ಡಿಡಿಯು-ಜಿಕೆವೈ ಕಾರ್ಯಕ್ರಮದಡಿ ರಾಜ್ಯಮಟ್ಟದಲ್ಲಿ CxO ಸಮಾವೇಶ ಆಯೋಜಿಸಿ ಖಾಸಗಿ ಕಂಪನಿಗಳನ್ನು ಈ ಸಮಾವೇಶಕ್ಕೆ ಆಹ್ವಾನಿಸಿ ಅವರಿಂದ ಹೆಚ್ಚಿನ ಉದ್ಯೋಗಾವಕಾಶಗಳ ಸೃಷ್ಟಿಗನುಗುಣವಾಗಿ ತರಬೇತಿ ಪಡೆದ ಅಭ್ಯರ್ಥಿಗಳನ್ನು ಒದಗಿಸುವಲ್ಲಿ ಸಮನ್ವಯ ಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತಿದೆ.<br><br>**2. <u>ಗ್ರಾಮೀಣ ಸ್ವ ಉದ್ಯೋಗ ತರಬೇತಿ ಕೇಂದ್ರ ಯೋಜನೆ</u> <u>(RSETI)</u>:** ಯಡಿ ಗ್ರಾಮಾಂತರ ಪ್ರದೇಶದಲ್ಲಿನ 18 ರಿಂದ 50 ವಯೋಮಾನದ ನಿರುದ್ಯೋಗಿ ಯುವಕ/ಯುವತಿಯರಿಗೆ ವಿವಿಧ ವೃತ್ತಿಗಳಡಿ ತರಬೇತಿಗಳನ್ನು ನೀಡಿ ಸ್ವಯಂ ಉದ್ಯೋಗ ಹೊಂದಲು ಬೆಂಬಲಿಸಲಾಗುತ್ತಿದೆ. ಒಟ್ಟು 64 ಕೋರ್ಸ್‌ಗಳ ತರಬೇತಿ ಲಭ್ಯವಿದ್ದು, 49 ಕೋರ್ಸ್‌ಗಳಲ್ಲಿ ತರಬೇತಿಗಳನ್ನು ಪಡೆಯಲು ಅಭ್ಯರ್ಥಿಗಳಿಗೆ ಸ್ಥಳೀಯ ಭಾಷೆಯಲ್ಲಿ ಓದು ಬರಹಗೊತ್ತಿರಬೇಕು.<br>• ಆರ್‌ಸೆಟಿ ಕಾರ್ಯಕ್ರಮವನ್ನು ಜಿಲ್ಲಾ ಲೀಡ್ ಬ್ಯಾಂಕ್ ಮುಖಾಂತರ ಅನುಷ್ಠಾನಗೊಳಿಲಾಗುತ್ತಿದ್ದು, ನಿರುದ್ಯೋಗ ಯುವಕ-ಯುವತಿಯರಿಗೆ ವಸತಿ ಸಹಿತ ಮತ್ತು ವಸತಿ ರಹಿತ ಕೌಶಲ್ಯ ತರಬೇತಿಯನ್ನು ಒದಗಿಸಿ, ತರಬೇತಿಯನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರವನ್ನು ಒದಗಿಸಿ ಬ್ಯಾಂಕ್ ಲಿಂಕೇಜ್ ಸೌಲಭ್ಯ ಪಡೆದು ಸ್ವ-ಉದ್ಯೋಗ ಕೈಗೊಳ್ಳಲು ಬೆಂಬಲಿಸಲಾಗುತ್ತಿದೆ.<br><br>ಒಟ್ಟಾರೆ ಈ ಮೇಲಿನ ಚಟುವಟಿಕೆಗಳನ್ನು ರಾಜ್ಯ ಹಾಗೂ ಜಿಲ್ಲಾ ಅಭಿಯಾನ ಘಟಕಗಳ ಮೂಲಕ ನಿರಂತರ ಸಮನ್ವಯ ಮತ್ತು ಮೇಲ್ವಿಚಾರಣೆ ಕೈಗೊಳ್ಳುವ ಮೂಲಕ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿಗಾಗಿ ಕ್ರಮವಹಿಸಲಾಗುತ್ತಿದೆ. |
| ಇ) | ಕನಿಷ್ಠ ವೇತನವನ್ನು ಕೊನೆಯದಾಗಿ ಯಾವಾಗ ಪರಿಷ್ಕರಿಸಲಾಗಿದೆ; ಪ್ರಸ್ತುತ ಕನಿಷ್ಠ ವೇತನ ದರ ಎಷ್ಟು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯು ರಾಜ್ಯದಲ್ಲಿ ಪ್ರಸ್ತುತ 81 ವಿವಿಧ ಅನುಸೂಚಿತ ಉದ್ದಿಮೆಗಳಿಗೆ ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಿ, ನಿಯಮಾನುಸಾರ ಕಾಲಕಾಲಕ್ಕೆ ವೇತನ ದರಗಳನ್ನು ಪರಿಷ್ಕರಿಸಲಾಗುತ್ತಿದೆ. ಕನಿಷ್ಠ ವೇತನ ಕಾಯ್ದೆ 1948 ರ ಕಲಂ 3 (1) (ಬಿ) ರ ಪ್ರಾವಧಾನಗಳನ್ವಯ ಪ್ರತಿ ಅನುಸೂಚಿತ ಉದ್ದಿಮೆಗೆ ಐದು (5) ವರ್ಷಗಳ ಅವಧಿ |

| | | |
|---|---|---|
| | | ಮೀರದಂತೆ ವೇತನ ದರಗಳನ್ನು ಪರಿಷ್ಕರಿಸಲಾಗುತ್ತದೆ. ವಿವಿಧ ಅನುಸೂಚಿತ ಉದ್ದಿಮೆಗಳಿಗೆ ಐದು (5) ವರ್ಷಗಳ ಅವಧಿಯು ಬೇರೆ ಬೇರೆ ಅವಧಿಗೆ ಪೂರೈಸುವ ಹಿನ್ನೆಲೆಯಲ್ಲಿ ಬೇರೆ ಬೇರೆ ದಿನಾಂಕಗಳಲ್ಲಿ ವೇತನ ದರಗಳನ್ನು ಪರಿಷ್ಕರಿಸಲಾಗುತ್ತದೆ. ನಿಕಟಪೂರ್ವದಲ್ಲಿ 2022-23 ನೇ ಸಾಲಿನಲ್ಲಿ ಒಟ್ಟು 37 ಅನುಸೂಚಿತ ಉದ್ದಿಮೆಗಳ ಪಟ್ಟಿಯನ್ನು **ಅನುಬಂಧ-1** ರಲ್ಲಿ ಒದಗಿಸಿದೆ. ಮುಂದುವರೆದು, 37 ಅನುಸೂಚಿತ ಉದ್ದಿಮೆಗಳನ್ನೂ ಒಳಗೊಂಡಂತೆ ಎಲ್ಲಾ 81 ಅನುಸೂಚಿತ ಉದ್ದಿಮೆಗಳಿಗೆ 2025-26ನೇ ಸಾಲಿಗೆ ಅನ್ವಯವಾಗುವ ಕನಿಷ್ಠ-ಗರಿಷ್ಠ ವೇತನ ದರಗಳ ಪಟ್ಟಿಯನ್ನು **ಅನುಬಂಧ-2** ರಲ್ಲಿ ಒದಗಿಸಿದೆ. |
| ಈ) | ಮಹಿಳಾ ಕಾರ್ಮಿಕರ ಸುರಕ್ಷತೆ ಮತ್ತು ಸಮಾನ ವೇತನ ಜಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪೂರ್ಣ ಮಾಹಿತಿ ಒದಗಿಸುವುದು). | ಕೇಂದ್ರ ಸರ್ಕಾರವು ಹೊಸ ಕಾರ್ಮಿಕ ಸಂಹಿತೆಗಳನ್ನು (Occupational Safety, Health and Working Conditions code, 2020 ಜಾರಿಗೊಳಿಸಲಾಗಿದೆ.<br><br>ಸದರಿ ಸಂಹಿತೆಯಲ್ಲಿ ಮಹಿಳಾ ಕಾರ್ಮಿಕರ ಸುರಕ್ಷತೆ ಮತ್ತು ಸಮಾನ ಕೆಲಸಕ್ಕೆ ಸಮಾನ ವೇತನ, ಮಹಿಳಾ ಕಾರ್ಮಿಕರಿಗೆ ರಾತ್ರಿ ಪಾಳಿಯಲ್ಲಿ ಕೆಲಸ ಮಾಡುವಾಗ ಸುರಕ್ಷತೆ, ಆರೋಗ್ಯ ಮತ್ತು ಕೆಲಸದ ಪರಿಸ್ಥಿತಿಗಳನ್ನು ಭದ್ರುಪಡಿಸಲಾಗಿದೆ.<br><br>ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಆದ್ಯತೆಯನ್ನು ನೀಡಲಾಗುತ್ತದೆ. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ (ತಡೆಗಟ್ಟುವಿಕೆ, ನಿಷೇದಿಸುವಿಕೆ, ನಿವಾರಿಸುವಿಕೆ) 2013 ಅನ್ನು ದಿನಾಂಕ: 09-12-2023ರಂದು ಜಾರಿಗೆ ತರಲಾಗಿದೆ. ಮಹಿಳೆಯರಿಗೆ ಕೆಲಸದ ಸ್ಥಳದಲ್ಲಿ ಸುರಕ್ಷಿತೆ ವಾತಾವರಣವನ್ನು ಕಲ್ಪಿಸುವುದೇ ಈ ಕಾಯ್ದೆಯ ಮುಖ್ಯ ಉದ್ದೇಶವಾಗಿದೆ.<br><br>ಆಗಿಂದ್ದಾಗೆ Random ಪರಿವೀಕ್ಷಣೆಗಳ ಮೂಲಕ ನಿಯತಕಾಲಿಕವಾಗಿ ಪರಿವೀಕ್ಷಣೆಗಳನ್ನು ನಡೆಸಿ ಮಹಿಳಾ ಸುರಕ್ಷತೆಯ ಕುರಿತು ಈ ಇಲಾಖಾ ವತಿಯಿಂದ ಪರಿಶೀಲಿಸಲಾಗುತ್ತಿದೆ.<br><br>ಕಾರ್ಮಿಕ ಆಯುಕ್ತಾಲಯದಲ್ಲಿ ಸಮಾನ ವೇತನ ಕಾಯ್ದೆ, 1976 ಅನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಕಾಯ್ದೆಯಡಿ ಯಾವುದೇ ಲಿಂಗಬೇಧವಿಲ್ಲದಂತೆ ಎಲ್ಲಾ ಪುರುಷ ಮತ್ತು ಮಹಿಳಾ ಕಾರ್ಮಿಕರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ದೊರಕಿಸಿಕೊಡುವ ಸಲುವಾಗಿ "ಸಮಾನ ವೇತನ ಕಾಯ್ದೆ,1976" ಅನ್ನು ಜಾರಿಗೆ ತರಲಾಗಿರುತ್ತದೆ. ಯಾವುದೇ ನಿರ್ದಿಷ್ಟ ಕೆಲಸಗಳಿಗೆ ನಿಗಧಿಪಡಿಸಿದ ನಿರ್ದಿಷ್ಟ ವೇತನವನ್ನು ಲಿಂಗಬೇಧ/ತಾರತಮ್ಯವಿಲ್ಲದಂತೆ ಎಲ್ಲಾ ಮಹಿಳಾ ಕಾರ್ಮಿಕರು/ನೌಕರರಿಗೆ ಮಾಲೀಕರು ಪಾವತಿ ಮಾಡಲು ಬಾದ್ಯಸ್ಥರಾಗಿರುತ್ತಾರೆ. ಇಲ್ಲದಿದ್ದಲ್ಲಿ ಅಂತಹ ಕಾರ್ಮಿಕರು ಕಾರ್ಯವ್ಯಾಪ್ತಿಯ ಕ್ಲೇಮ್ ಪ್ರಾಧಿಕಾರಿಗಳ ಮುಂದೆ ಕ್ಲೇಮ್ ಸಲ್ಲಿಸಿ ಪರಿಹಾರ ಪಡೆಯಬಹುದಾಗಿರುತ್ತದೆ. |

| | | |
|---|---|---|
| | | ಆದರೆ ಸದರಿ ವಿಷಯದ ಬಗ್ಗೆ ಇಲಾಖೆಯಲ್ಲಿ ಸಮಾನ ವೇತನ ಪಾವತಿಯಾಗದೆ ಇರುವ ಕುರಿತು ಯಾವುದೇ ದೂರುಗಳು/ಕ್ಲೇಮ್ ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ. |
| ಉ) | ಬಾಲಕಾರ್ಮಿಕರನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳ ಫಲಿತಾಂಶವೇನು? | ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಸರ್ಕಾರವು ಈ ಕೆಳಕಂಡ ಪ್ರಮುಖ ಕ್ರಮಗಳನ್ನು ಕೈಗೊಂಡಿರುತ್ತದೆ;<br>• ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) ಕಾಯ್ದೆ, 1986 ಅನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವುದು. ಸದರಿ ಕಾಯ್ದೆಯನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ ಹಾಗೂ 14-18ರ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕಿಶೋರಾವಸ್ಥೆಯ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ.<br>• ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಪ್ರಾವಧಾನದನ್ವಯ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ನಿಯೋಜಿಸಿಕೊಂಡಲ್ಲಿ ಅಂತಹ ಮೊದಲ ಅಪರಾಧಕ್ಕೆ ತಪ್ಪಿತಸ್ಥ ಮಾಲೀಕರಿಗೆ 6 ತಿಂಗಳಿನಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ, ರೂ.20,000/- ರಿಂದ ರೂ.50.000/- ರವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಪುನರಾವರ್ತಿತ ಅಪರಾಧಕ್ಕೆ 1 ವರ್ಷದಿಂದ 3 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿರುತ್ತದೆ. ಪೋಷಕರಾಗಿದ್ದಲ್ಲಿ ಲಘು ಶಿಕ್ಷೆ ಪ್ರಾವಧಾನವಿದ್ದು, ಪುನರಾವರ್ತಿತ ಅಪರಾಧಕ್ಕೆ ರೂ.10,000/- ಗಳ ದಂಡವನ್ನು ಸಕ್ಷಮ ನ್ಯಾಯಾಲಯವು ವಿಧಿಸಬಹುದಾಗಿರುತ್ತದೆ.<br>• ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸ್ಥಾಪನೆಗಳು ಕಾಯ್ದೆ, 1961ರನ್ವಯ ಅಂಗಡಿ ಮತ್ತು ಮಳಿಗೆಗಳಿಗೆ ಅನುಮತಿ(ಲೈಸನ್ಸ್) ನೀಡುವ ಮುನ್ನ ಅವರಿಗೆ ಕಡ್ಡಾಯವಾಗಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಯಾವುದೇ ಮಗುವನ್ನು ಯಾವುದೇ ಸಂಸ್ಥೆಗಳಲ್ಲಿ ಕೆಲಸ ಮಾಡುವುದನ್ನು ನಿಷೇಧಿಸಿರುತ್ತದೆ. ಈ ಕುರಿತು ಸಂಸ್ಥೆಗಳಿAದ ಫಾರ್ಮ್-ಜಿ ಧೃಡೀಕರಣವನ್ನು ಪಡೆಯಲಾಗುತ್ತಿದೆ.<br>• ಜಿಲ್ಲೆಗಳಲ್ಲಿ ಜಿಲ್ಲಾ ದಂಡಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಕಾರ್ಯಪಡೆ (Task Force)ಯನ್ನು ಹಾಗೂ ತಾಲ್ಲೂಕಿನಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕಾರ್ಯಪಡೆ (Task Force) ಯನ್ನು ರಚಿಸಲಾಗಿದೆ.<br>• ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ಪರಿಣಾಮಕಾರಿಯಾಗಿ ನಿರ್ಮೂಲನೆ ಮಾಡುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿ, ಕಾರ್ಯಕಾರಿ ಸಮಿತಿಗಳನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ |

| | | |
|---|---|---|
| | | ಬಾಲ ಕಾರ್ಮಿಕ ನಿರ್ಮೂಲನೆ ಹಾಗೂ ಪುನರ್ವಸತಿ ಸಮಿತಿಗಳನ್ನು ರಚಿಸಲಾಗಿರುತ್ತದೆ.<br>• ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕಲಂ 17ರಡಿ ಸರ್ಕಾರದ 11 ಇಲಾಖೆಗಳ ಅಧಿಕಾರಿಗಳನ್ನು ಹಾಗೂ ಕಲಂ 16 ರಡಿಯಲ್ಲಿ ಪೊಲೀಸ್ ಇಲಾಖೆ ಹಾಗೂ ಕಾರ್ಮಿಕ ಇಲಾಖೆಯ ಅಧಿಕಾರಿ/ನಿರೀಕ್ಷಕರನ್ನು ನಿರೀಕ್ಷಕರುಗಳನ್ನಾಗಿ ನೇಮಿಸಲಾಗಿದೆ. ಅಧಿಸೂಚಿಸಲ್ಪಟ್ಟ ಅಧಿಕಾರಿಗಳ ಹೋಬಳಿವಾರು ತಂಡವನ್ನು ರಚಿಸಿ ಪ್ರತಿಯೊಂದು ತಂಡವೂ ಮಾಸಿಕ ಕನಿಷ್ಠ 15 ತಪಾಸಣೆಗಳನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿದ್ದು, ತಪಾಸಣೆಗಳಲ್ಲಿ/ ದಾಳಿಗಳಲ್ಲಿ ಪತ್ತೆಯಾದ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿ (Child Welfare Committee)ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲು ಕ್ರಮ ಕೈಗೊಳ್ಳುವುದು ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ / ಕಿತ್ತೂರು ರಾಣಿ ಚೆನ್ನಮ್ಮ/ ಅಟಲ್ ಬಿಹಾರಿ ವಾಜಪೇಯಿ/ ಶ್ರೀಮತಿ ಇಂದಿರಾಗಾಂಧಿ/ ಡಾ\|\| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮತ್ತು ಶ್ರೀ ನಾರಾಯಣ ಗುರು ಶಾಲೆಗಳಿಗೆ ವಿಶೇಷ ವರ್ಗಗಳ ಅಭ್ಯರ್ಥಿಗಳನ್ನು ಪ್ರವೇಶ ಪರೀಕ್ಷೆ ಇಲ್ಲದೆ ನೇರವಾಗಿ ದಾಖಲಾತಿ ಮಾಡಲಾಗುತ್ತಿದೆ.<br>• ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯ ನಿರ್ಮೂಲನೆ ಕುರಿತು ವ್ಯಾಪಕವಾದ ಜಾಗೃತಿ ಮೂಡಿಸಲು ಗೋಡೆ ಬರಹಗಳು, ಕರಪತ್ರಗಳು, ಆಟೋ ಪ್ರಚಾರಗಳು, ತರಬೇತಿ ಕಾರ್ಯಾಗಾರಗಳು, ಬಿತ್ತಿ ಪತ್ರಗಳು, ಬೀದಿನಾಟಕಗಳು ಹಾಗೂ ಕಾನೂನು ಅರಿವು-ನೆರವು ಕಾರ್ಯಕ್ರಮಗಳ ನಿರಂತರ ಆಯೋಜನೆ ಹಾಗೂ ಸಾಂಪ್ರದಾಯಿಕ ಮಾಧ್ಯಮಗಳು ಹಾಗೂ ಆಧುನಿಕ ವಿದ್ಯುನ್ಮಾನ/ ಮುದ್ರಣ ಮಾಧ್ಯಮಗಳನ್ನು ಬಳಸಿಕೊಂಡು ಈ ಬಗ್ಗೆ "ಅರಿವು-ನೆರವು" ಕಾರ್ಯವನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆಸಲಾಗುತ್ತಿದೆ.<br>• ಮೇಲ್ಕಂಡ ಕ್ರಮಗಳನ್ವಯ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯ ನಿರ್ಮೂಲನೆ ಕುರಿತು ಹೆಚ್ಚಿನ ಮಾಹಿತಿ, ಶಿಕ್ಷಣ ಹಾಗೂ ಸಂವಹನ (ಐ.ಇ.ಸಿ) ಕಾರ್ಯಕ್ರಮಗಳನ್ನು ಹಾಗೂ ಬಾಲ ಹಾಗೂ ಕಿಶೋರ ಕಾರ್ಮಿಕರ ತಪಾಸಣೆ/ದಾಳಿಗಳನ್ನು ನಡೆಸಲಾಗುತ್ತಿದೆ ಮತ್ತು ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಇವರ ನಿರ್ದೇಶನದಂತೆ PAN INDIA Rescue & Rehabilitation Campaign Of Child And Adolescent |

| | | | |
|---|---|---|---|
| | | | Labour ಬಾಲಕಾರ್ಮಿಕ ರಕ್ಷಣೆ, ಪುನರ್ವಸತಿ ಕಾರ್ಯಕ್ರಮವನ್ನು ಆಯೋಜಿಸಿಸುತ್ತಿರುವುದರಿಂದ ಕೆಲಸದಲ್ಲಿ ತೊಡಗಿರುವ ಹೆಚ್ಚಿನ ಬಾಲ ಹಾಗೂ ಕಿಶೋರ ಕಾರ್ಮಿಕರು ಕಂಡುಬರುತ್ತಿದ್ದು, ಅವರನ್ನು ಪುನರ್ವಸತಿಗೊಳಿಸಿ, ಮುಖ್ಯವಾಹಿನಿಗೆ ತರುವ ಸಂಬಂಧ ಕಾರ್ಯನಿರ್ವಹಿಸಲಾಗುತ್ತಿದೆ. |

**ಕಾಇ 76 ಸ್ವೀಮರ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2056 ಕ್ಕೆ ಅನುಬಂಧ-1**

**2022-23 ನೇ ಸಾಲಿನಲ್ಲಿ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಲಾದ ಅನುಸೂಚಿತ ಉದ್ದಿಮೆಗಳ ಪಟ್ಟಿ**

| ಕ್ರ. ಸಂ | ಅನುಸೂಚಿತ ಉದ್ದಿಮೆಗಳ ಹೆಸರು |
|---|---|
| 1. | ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಉದ್ಯೋಗ |
| 2. | ಶೌಚಾಲಯಗಳು, ಸ್ನಾನಗೃಹಗಳು, ಒಳಚರಂಡಿಗಳನ್ನು ಶುಚಿ ಮಾಡುವ (Scavenging) ಕೆಲಸಗಳಲ್ಲಿ ಉದ್ಯೋಗ. (ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹೊರತುಪಡಿಸಿ). |
| 3. | ಮೀನು ಹಿಡಿಯುವುದು, ಮೀನು ಸಂಸ್ಕರಣೆ, ಮೀನು ಪೀಲಿಂಗ್, ಸೀಗಡಿ / ಏಡಿ ಸಂಸ್ಕರಣೆ ಹಾಗೂ ಕಪ್ಪೆ ಕಾಲು ರಫ್ತು ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ. |
| 4. | ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ. (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ). |
| 5. | ಸ್ವಯಂಯಾನ ಯಂತ್ರ ಶಾಸ್ತ್ರ (ಆಟೋಮೊಬೈಲ್ ಇಂಜಿನಿಯರಿಂಗ್) (ಉತ್ಪಾದನೆ, ಅಸೆಂಬ್ಲಿಂಗ್, ಬಾಡಿ ಬಿಲ್ಡಿಂಗ್, ಸರ್ವೀಸಿಂಗ್ ಮತ್ತು ರಿಪೇರಿ ಕೆಲಸಗಳ ಸಹಿತ) |
| 6. | ಫೌಂಡ್ರಿ (ಯಂತ್ರಗಳ ಸಹಿತ ಅಥವಾ ರಹಿತ ಮೆಷಿನ್ ಶಾಪ್) ಗಳಲ್ಲಿ ಉದ್ಯೋಗ. |
| 7. | ವಿನೀರ್ ಉದ್ದಿಮೆಗಳಲ್ಲಿ ಉದ್ಯೋಗ |
| 8. | ಜೇಡಿ ಮಣ್ಣಿನ ಮಡಿಕೆಗಳು, ಸಿರಾಮಿಕ್ಸ್ ಸ್ಟೋನ್ ವೇರ್ ಮತ್ತು ಇತರೆ ಉತ್ಪನ್ನಗಳ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ |
| 9. | ವಸತಿ ನಿಲಯಗಳು (ಹಾಸ್ಟೆಲ್‌ಗಳು), ಅತಿಥಿ ಗೃಹಗಳು, ಹೋಮ್ ಸ್ಟೇಗಳು, ಪೇಯಿಂಗ್ ಗೆಸ್ಟ್ ಸಂಸ್ಥೆಗಳು, ಸರ್ವೀಸ್ಡ್ ಅಪಾರ್ಟ್‌ಮೆಂಟ್‌ಗಳು, ರೆಸಿಡೆಂಟ್ಸ್ ಅಸೋಸಿಯೇಷನ್, ಮದುವೆ ಹಾಗೂ ಸಮುದಾಯ ಭವನಗಳಲ್ಲಿ ಉದ್ಯೋಗ. |
| 10. | ಎಣ್ಣೆ ಮಿಲ್‌ಗಳಲ್ಲಿ ಉದ್ಯೋಗ. |
| 11. | ಹಾಲು ಶೇಖರಣೆ, ಸಂಸ್ಕರಣೆ ಹಾಗೂ ವಿತರಣಾ ಪ್ರಕ್ರಿಯೆಯ ಉದ್ದಿಮೆಗಳಲ್ಲಿ ಉದ್ಯೋಗ |
| 12. | ಲಘು ಪಾನೀಯ ಸೋಡಾ ಸಹಿತ ಎಲ್ಲಾ ಇಂಗಾಲಾಮ್ಲಿತ ಪಾನೀಯ, ಮಿನರಲ್ (ಖನಿಜ) ನೀರು ಮತ್ತು ಜ್ಯೂಸ್ (ಹಣ್ಣಿನ ರಸ) ಉತ್ಪಾದನೆ ಹಾಗೂ ಸಂಬಂಧಪಟ್ಟ ಪ್ರಕ್ರಿಯೆಗಳಲ್ಲಿ ಉದ್ಯೋಗ |
| 13. | ಮುದ್ರಣ ಹಾಗೂ ಪ್ರಸರಣಾ ಉದ್ದಿಮೆಗಳಲ್ಲಿ ಉದ್ಯೋಗ. |
| 14. | ಮದ್ಯ ತಯಾರಿಕಾ (ಡಿಸ್ಟಿಲರೀಸ್ ಹಾಗೂ ಬ್ರಿವರೀಸ್), ಬಾಟಲಿಂಗ್ ಹಾಗೂ ಪ್ಯಾಕಿಂಗ್ ಸಹಿತ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ |
| 15. | ಕ್ಲಬ್‌ಗಳಲ್ಲಿ ಉದ್ಯೋಗ |
| 16. | ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹ ಕೆಲಸಗಳ ಉದ್ಯೋಗ. |
| 17. | ಎಲೆಕ್ಟ್ರಾನಿಕ್ಸ್ ಮತ್ತು ಎಲೆಕ್ಟ್ರೋಪ್ಲೇಟಿಂಗ್ ಉದ್ದಿಮೆಗಳಲ್ಲಿ ಉದ್ಯೋಗ ಉದ್ದಿಮೆಗಳಲ್ಲಿ ಉದ್ಯೋಗ |
| 18. | ಆಹಾರ ಸಂಸ್ಕರಣೆ ಮತ್ತು ಆಹಾರ ಪದಾರ್ಥಗಳ ಪ್ಯಾಕಿಂಗ್ (ಸಿದ್ಧ ತಿನಿಸುಗಳು, ಸಿದ್ಧ ಪಾನೀಯ ಹಾಗೂ ಮಸಾಲೆ ಸಹಿತ) ಪ್ರಕ್ರಿಯೆಗಳಲ್ಲಿ ಉದ್ಯೋಗ. |
| 19. | ಮಂಜುಗಡ್ಡೆ ಕಾರ್ಖಾನೆ (ಐಸ್ ಫ್ಯಾಕ್ಟರಿ) ಐಸ್ ಕ್ರೀಮ್ ಹಾಗೂ ಶೀತಲ ಸಂರಕ್ಷಣಾ ಸಂಸ್ಥೆಗಳಲ್ಲಿ ಉದ್ಯೋಗ. |
| 20. | ಆಯುರ್ವೇದ, ಯೋಗ, ಯುನಾನಿ, ಸಿದ್ಧ ಹೋಮಿಯೋಪತಿ (ಆಯುಷ್) ಹಾಗೂ ಅಲೋಪತಿಕ್ ಔಷಧಿಗಳ ತಯಾರಿಕೆಯಲ್ಲಿ ಉದ್ಯೋಗ. (ಉತ್ಪಾದನೆ, ವಿತರಣೆ ಜಾಹಿರಾತು ವಿಭಾಗಗಳ ಸಹಿತ) |
| 21. | ಲಘು ಸಿಮೆಂಟ್ ಸ್ಥಾವರಗಳಲ್ಲಿ ಉದ್ಯೋಗ |

| | |
|---|---|
| 22. | ಖಾಸಗಿ ವಿತ್ತ ನಿಗಮಗಳು, (ಫೈನಾನ್ಸ್ ಕಾರ್ಪೊರೇಷನ್) ಚಿಟ್ ಫಂಡ್‌ಗಳು ಹಾಗೂ ಕಾನೂನು ಬದ್ಧ ಬ್ಯಾಂಕಿಂಗ್ ರಹಿತ ನಗದು ವಹಿವಾಟು ಸಂಸ್ಥೆಗಳಲ್ಲಿ ಉದ್ಯೋಗ. |
| 23. | ಲೋಹದ ಅಲ್ಮೇರಾಗಳು, ಕುರ್ಚಿಗಳು, ಮೇಜುಗಳು ಹಾಗೂ ಇತರೆ ಪೀಠೋಪಕರಣಗಳನ್ನು ಉತ್ಪಾದಿಸುವ ಉದ್ದಿಮೆಗಳಲ್ಲಿ ಉದ್ಯೋಗ. |
| 24. | ಔಷಧಿಗಳು, ಗೃಹಪಯೋಗಿ ವಸ್ತುಗಳ ವೃತ್ತಿಪರ ಪ್ರವರ್ತಕ ಮತ್ತು ಮಾರಾಟದಲ್ಲಿ ಉದ್ಯೋಗ. |
| 25. | ಬಟ್ಟೆ ಒಗೆಯುವ, ಡ್ರೈಕ್ಲೀನ್ ಮತ್ತು ಲಾಂಡ್ರಿ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ. |
| 26. | ಮರದ ದಿಮ್ಮಿಗಳ ಘಟಕಗಳಲ್ಲಿ ಉದ್ಯೋಗ. |
| 27. | ಹೋಟೆಲ್ / ವಸತಿ ಸಹಿತ ಹೋಟೆಲ್‌ಗಳು, ರೆಸ್ಟೋರೆಂಟ್ ಮೊಟೆಲ್‌ಗಳು, ಲಾಡ್ಜ್‌ಗಳು, ಡಾಬಾಗಳು, ಕ್ಯಾಂಟೀನ್, ಹೊರಾಂಗಣ ಆಹಾರ ತಯಾರಿಕೆ ಹಾಗೂ ಸರಬರಾಜು (ಕೇಟರಿಂಗ್) ಮತ್ತು ಸಂಬಂಧಪಟ್ಟ ಸಂಸ್ಥೆಗಳಲ್ಲಿ ಉದ್ಯೋಗ. |
| 28. | ಚಲನಚಿತ್ರ (ಸಿನಿಮಾ / ಕಿರು ಚಿತ್ರ) ಉದ್ದಿಮೆಗಳ ನಿರ್ಮಾಣ, ವಿತರಣೆ, ಜಾಹಿರಾತು ಹಾಗೂ ಸಂಬಂಧಪಟ್ಟ ಕೆಲಸಗಳಲ್ಲಿ ಉದ್ಯೋಗ. |
| 29. | ಪ್ಲಾಸ್ಟಿಕ್, ಪಾಲಿ ಪ್ಲಾಸ್ಟಿಕ್, ರಬ್ಬರ್, ಪಿವಿಸಿ ಪೈಪ್ಸ್ ಉತ್ಪಾದನಾ  ಉದ್ದಿಮೆಗಳಲ್ಲಿ ಉದ್ಯೋಗ. |
| 30. | ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಉದ್ಯೋಗ. |
| 31. | ಆಸ್ಪತ್ರೆಗಳು, ಪ್ರಸವಾಲಯಗಳು (ಮೆಟರ್ನಿಟಿ ಹೋಂಗಳು), ಶುಶ್ರೂಷಾಲಯ (ನರ್ಸಿಂಗ್ ಹೋಂಗಳು) ಕ್ಲಿನಿಕ್, ಹಾಗೂ ವ್ಯಸನ ಮುಕ್ತ ಕೇಂದ್ರಗಳಲ್ಲಿ ಉದ್ಯೋಗ |
| 32. | ಗಾಜು ಮತ್ತು  ಗಾಜಿನ ಉತ್ಪನ್ನಗಳ ಸಂಸ್ಥೆಗಳಲ್ಲಿ  ಉದ್ಯೋಗ |
| 33. | ಸ್ಪನ್ ಪೈಪುಗಳು, ಕಾಂಕ್ರೀಟ್ ಪೈಪುಗಳು, ಸಾನಿಟರಿ ಫಿಟ್ಟಿಂಗ್‌ಗಳು, ಪ್ಲೈನ್ ಸಿಮೆಂಟ್ ಕಾಂಕ್ರೀಟ್ (ಪಿ.ಸಿ.ಸಿ.) ಹಾಗೂ ರೀ-ಇನ್‌ಪೋರ್ಸ್ಡ್ ಸಿಮೆಂಟ್ ಕಾಂಕ್ರೀಟ್ (ಆರ್.ಸಿ.ಸಿ). ಪೈಪುಗಳು ಮತ್ತು ಕಂಬಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ. |
| 34. | ಬಟ್ಟೆಗಳ ತಯಾರಿಕೆ (ಗಾರ್ಮೆಂಟ್ಸ್), ವಸ್ತ್ರ  ವಿನ್ಯಾಸ (ಕಾಸ್ಟ್ಯೂಮ್ಸ್) ಮತ್ತು ಟೈಲರಿಂಗ್ ಉದ್ದಿಮೆಗಳಲ್ಲಿ ಉದ್ಯೋಗ |
| 35. | ರೇಷ್ಮೆ ಬಟ್ಟೆಗಳ (ಸಿಲ್ಕ್) ಉದ್ದಿಮೆಗಳಲ್ಲಿ ಉದ್ಯೋಗ |
| 36. | ಬಟ್ಟೆಗಳಿಗೆ ಬಣ್ಣ  ಹಾಕುವ (ಡೈ) ಮತ್ತು ಅಚ್ಚು ಹಾಕುವ (ಪ್ರಿಂಟ್) ಹಾಕುವ ಉದ್ದಿಮೆಗಳಲ್ಲಿ ಉದ್ಯೋಗ |
| 37. | ಸ್ಪಿನ್ನಿಂಗ್ ಮಿಲ್ ಉದ್ದಿಮೆಗಳಲ್ಲಿ ಉದ್ಯೋಗ |

ಅನುಬಂಧ-2

| 2025–26ನೇ ಸಾಲಿನ ಅನುಸೂಚಿತ ಉದ್ದಿಮೆಗಳಿಗೆ ಕನಿಷ್ಠ ವೇತನ ನಿಗದಿ ಮತ್ತು ಪರಿಷ್ಕರಣೆ ಕುರಿತ ಕನಿಷ್ಠ ಮತ್ತು ಗರಿಷ್ಠ ವೇತನ ದರಗಳ ವಿವರಣೆ | | | | | |
|---|---|---|---|---|---|
| ಕ್ರ ಸಂ | ಅನುಸೂಚಿತ ಉದ್ದಿಮೆಯ ಹೆಸರು | ಕನಿಷ್ಠ ವೇತನ ದರಗಳು (2025–26) | | | |
| | | ದೈನಿಕ | | ಮಾಸಿಕ | |
| | | ಕನಿಷ್ಠ | ಗರಿಷ್ಠ | ಕನಿಷ್ಠ | ಗರಿಷ್ಠ |
| 1 | ಬೇಸಾಯ ಮತ್ತು ಸಂಬಂಧಿತ ಕೆಲಸಗಳಲ್ಲಿ ಉದ್ಯೋಗ | 533.21 | 533.21 | 13863.56 | 13863.56 |
| 2 | ಲಘು ಪಾನೀಯ ಸೋಡಾ ಸಹಿತ ಎಲ್ಲಾ ಇಂಗಾಲಾಮ್ಲಿತ ಪಾನೀಯ, ಮಿನರಲ್ (ಖನಿಜ) ನೀರು ಮತ್ತು ಜ್ಯೂಸ್ (ಹಣ್ಣಿನ ರಸ) ಉತ್ಪಾದನೆ ಹಾಗೂ ಸಂಬಂಧಪಟ್ಟ ಪ್ರಕ್ರಿಯೆಗಳಲ್ಲಿ ಉದ್ಯೋಗ. | 565.05 | 774.76 | 14691.32 | 20143.79 |
| 3 | ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ | 516.20 | 592.35 | 13421.16 | 15401.16 |
| 4 | ಅಡಿಕೆ (ಸುಪಾರಿ) ಉದ್ದಿಮೆಗಳಲ್ಲಿ ಉದ್ಯೋಗ | 543.22 | 603.90 | 14123.60 | 15701.43 |
| 5 | ಸ್ವಯಂಯಾನ ಯಂತ್ರ ಶಾಸ್ತ್ರ (ಆಟೋಮೊಬೈಲ್ ಇಂಜನಿಯರಿಂಗ್) (ಉತ್ಪಾದನೆ, ಅಸೆಂಬ್ಲಿಂಗ್, ಬಾಡಿ ಬಿಲ್ಡಿಂಗ್, ಸರ್ವೀಸಿಂಗ್ ಮತ್ತು ರಿಪೇರಿ ಕೆಲಸಗಳ ಸಹಿತ) | 519.39 | 771.42 | 13504.07 | 20056.85 |
| 6 | ಬೇಕರಿ ಉದ್ದಿಮೆ ಮತ್ತು ಬೇಕಿಂಗ್ ಪ್ರಕ್ರಿಯೆಗಳಲ್ಲಿ ಉದ್ಯೋಗ. | 543.22 | 751.42 | 14123.60 | 19537.00 |
| 7 | ಬೀಡಿ ತಯಾರಿಕೆ ಪ್ರಕ್ರಿಯೆಯಲ್ಲಿ ಉದ್ಯೋಗ | 354.03 | 825.29 | 9204.90 | 21457.60 |
| 8 | ತಂಬಾಕು ಸಂಸ್ಕರಣಾ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |

| | | | | | |
|---|---|---|---|---|---|
| 9 | ಬಿಸ್ಕತ್ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 543.22 | 697.50 | 14123.60 | 18134.87 |
| 10 | ಹಿತ್ತಾಳೆ, ತಾಮ್ರ, ಅಲ್ಯೂಮಿನಿಯಂ, ಉಕ್ಕು (ಸ್ಟೀಲ್), ಹಿಂಡಾಲಿಯಮ್ ಪಾತ್ರೆಗಳು ಮತ್ತು ಇತರ ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 11 | ಇಟ್ಟಿಗೆ ತಯಾರಿಕೆ ಹಾಗೂ ಪೂರ್ವ ಒತ್ತಡ (ಪ್ರೀ- ಸ್ಟ್ರೆಸ್‌ಡ್) ದೊಂದಿಗೆ ತಯಾರಿಸಿದ ಉತ್ಪನ್ನಗಳ ತಯಾರಿಕೆಯ ಉದ್ದಿಮೆಗಳಲ್ಲಿ ಉದ್ಯೋಗ | 581.07 | 621.01 | 15107.70 | 16146.22 |
| 12 | ಮರದ ಕೆಲಸ [ಕಾರ್ಪೆಂಟರಿ] ಹಾಗೂ ಮರ ಕೊಯ್ಯುವ [ಸಾಮಿಲ್] ಸಂಸ್ಥೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 13 | ಪ್ಲೈವುಡ್ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 14 | ಮರದ ದಿಮ್ಮಿಗಳ ಘಟಕಗಳಲ್ಲಿ ಉದ್ಯೋಗ. | 519.22 | 712.98 | 13499.78 | 18537.60 |
| 15 | ವಿನೀರ್ ಉದ್ದಿಮೆಗಳಲ್ಲಿ ಉದ್ಯೋಗ | 565.05 | 754.26 | 14691.32 | 19610.86 |
| 16 | ಏಲಕ್ಕಿ ಮಲ್ಲಿಗಳು ಮತ್ತು ಏಲಕ್ಕಿ ತೋಟಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 17 | ಗೋಡಂಬಿ ಸಂಸ್ಕರಣಾ ಉದ್ದಿಮೆಗಳಲ್ಲಿ ಉದ್ಯೋಗ. | 554.09 | 598.95 | 14406.40 | 15572.70 |
| 18 | ಜೇಡಿ ಮಣ್ಣಿನ ಮಡಿಕೆಗಳು, ಸಿರಾಮಿಕ್ಸ್ ಸ್ಟೋನ್ ವೇರ್ ಮತ್ತು ಇತರೆ ಉತ್ಪನ್ನಗಳ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 565.92 | 771.42 | 14713.85 | 20056.85 |
| 19 | ಸಿಂಕೋನಾ, ರಬ್ಬರ್, ಟೀ & ಕಾಫೀ ತೋಟಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿಗಳನ್ನು ಹೊರತುಪಡಿಸಿ) | 476.11 | 495.11 | 12378.80 | 12872.80 |

| | | | | | |
|---|---|---|---|---|---|
| 20 | ಸಿಂಕೋನಾ, ರಬ್ಬರ್, ಟೀ & ಕಾಫೀ ತೋಟಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿಗಳು) | 507.11 | 545.11 | 13184.80 | 14172.80 |
| 21 | ರಾಸಾಯನಿಕ ರಸಗೊಬ್ಬರ, ಕೀಟ ನಾಶಕ, ಕ್ರಿಮಿನಾಶಕ ಉತ್ಪಾದನಾ ಉದ್ದಿಮೆಯ ಕೆಲಸಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 22 | ಕ್ಲಬ್‌ಗಳಲ್ಲಿ ಉದ್ಯೋಗ | 565.07 | 760.12 | 14691.80 | 19763.12 |
| 23 | ಕಾಫಿ ಕ್ಯೂರಿಂಗ್ ಸಂಸ್ಥೆಗಳಲ್ಲಿ ಉದ್ಯೋಗ. | 543.09 | 647.36 | 14120.40 | 15043.40 |
| 24 | ಮಿಠಾಯಿ ತಯಾರಿಸುವ (ಕನ್‌ಫೆಕ್ಷನರಿ) ಉದ್ದಿಮೆಗಳಲ್ಲಿ ಉದ್ಯೋಗ. | 543.22 | 697.50 | 14123.60 | 18134.87 |
| 25 | ಹತ್ತಿ ಹೆಕ್ಕುವ, ಅಮಕುವ ಮತ್ತು ಸಂಬಂಧಪಟ್ಟ ಪ್ರಕ್ರಿಯೆಗಳ ಕೆಲಸಗಳಲ್ಲಿ ಉದ್ಯೋಗ. | 526.10 | 583.66 | 13678.68 | 15175.20 |
| 26 | ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಉದ್ಯೋಗ | 538.64 | 739.09 | 14004.68 | 19216.37 |
| 27 | ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹ ಕೆಲಸಗಳ ಉದ್ಯೋಗ | 538.81 | 773.57 | 14008.97 | 20112.75 |
| 28 | ಎಲೆಕ್ಟ್ರಾನಿಕ್ಸ್ ಉದ್ದಿಮೆಗಳಲ್ಲಿ ಉದ್ಯೋಗ | 565.05 | 796.72 | 14691.32 | 20714.79 |
| 29 | ಎಲೆಕ್ಟ್ರಾನಿಕ್ಸ್ ಮತ್ತು ಎಲೆಕ್ಟ್ರೋಪ್ಲೇಟಿಂಗ್ ಉದ್ದಿಮೆಗಳಲ್ಲಿ ಉದ್ಯೋಗ. | 565.05 | 774.76 | 14691.32 | 20143.79 |
| 30 | ಅನುಸೂಚಿತ ಪಟ್ಟಿಗೆ ಸೇರದ ಉದ್ದಿಮೆಯ ಕೆಲಸದಲ್ಲಿ ಉದ್ಯೋಗ. | 543.22 | 751.42 | 14123.60 | 19537.00 |

| | | | | | |
|---|---|---|---|---|---|
| 31 | ಇಂಜನಿಯರಿಂಗ್, ಫ್ಯಾಬ್ರಿಕೇಷನ್ ಹಾಗೂ ಸಂಬಂಧಪಟ್ಟ ಉದ್ದಿಮೆಯ ಕೆಲಸಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 32 | ಚಲನಚಿತ್ರ (ಸಿನಿಮಾ / ಕಿರು ಚಿತ್ರ) ಉದ್ದಿಮೆಗಳ ನಿರ್ಮಾಣ, ವಿತರಣೆ, ಜಾಹಿರಾತು ಹಾಗೂ ಸಂಬಂಧಪಟ್ಟ ಕೆಲಸಗಳಲ್ಲಿ ಉದ್ಯೋಗ | 519.22 | 732.95 | 13499.78 | 19056.65 |
| 33 | ಮೀನು ಹಿಡಿಯುವುದು, ಮೀನು ಸಂಸ್ಕರಣೆ, ಮೀನು ಪೀಲಿಂಗ್, ಸೀಗಡಿ / ಏಡಿ ಸಂಸ್ಕರಣೆ ಹಾಗೂ ಕಪ್ಪೆ ಕಾಲು ರಫ್ತು ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 683.72 | 778.92 | 17776.80 | 20251.80 |
| 34 | ಆಹಾರ ಸಂಸ್ಕರಣೆ ಮತ್ತು ಆಹಾರ ಪದಾರ್ಥಗಳ ಪ್ಯಾಕಿಂಗ್ (ಸಿದ್ಧ ತಿನಿಸುಗಳು, ಸಿದ್ಧ ಪಾನೀಯ ಹಾಗೂ ಮಸಾಲೆ ಸಹಿತ) ಪ್ರಕ್ರಿಯೆಗಳಲ್ಲಿ ಉದ್ಯೋಗ | 565.05 | 774.76 | 14691.32 | 20143.79 |
| 35 | ಅರಣ್ಯ ಮತ್ತು ಕಟ್ಟಿಗೆ ಡಿಪೋ (ಫಾರೆಸ್ಟ್ರಿ ಮತ್ತು ಟಿಂಬರಿಂಗ್) ಉದ್ದಿಮೆಗಳಲ್ಲಿ ಉದ್ಯೋಗ | 603.90 | 697.50 | 15701.43 | 18134.87 |
| 36 | ಫೌಂಡ್ರಿ (ಯಂತ್ರಗಳ ಸಹಿತ ಅಥವಾ ರಹಿತ ಮೆಷಿನ್ ಶಾಫ್) ಗಳಲ್ಲಿ ಉದ್ಯೋಗ | 519.39 | 771.42 | 13504.07 | 20056.85 |
| 37 | ಗಾಜು ಮತ್ತು ಗಾಜಿನ ಉತ್ಪನ್ನಗಳ ಸಂಸ್ಥೆಗಳಲ್ಲಿ ಉದ್ಯೋಗ | 524.17 | 726.29 | 13628.48 | 18883.62 |
| 38 | ಗ್ರಾನೈಟ್ ಕಲ್ಲುಗಳು ಹಾಗೂ ಮಾರ್ಬಲ್ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 39 | ಕೈಮಗ್ಗ ಮತ್ತು ವಿದ್ಯುತ್‌ಚಾಲಿತ ಮಗ್ಗ [ಹತ್ತಿ] ಉದ್ದಿಮೆಗಳಲ್ಲಿ ಉದ್ಯೋಗ. | 501.78 | 565.25 | 13046.40 | 14696.40 |

| | | | | | |
|---|---|---|---|---|---|
| 40 | ಆಸ್ಪತ್ರೆಗಳು, ಪ್ರಸವಾಲಯಗಳು (ಮೆಟರ್ನಿಟಿ ಹೋಂಗಳು), ಶುಶ್ರೂಷಾಲಯ (ನರ್ಸಿಂಗ್ ಹೋಂಗಳು) ಕ್ಲಿನಿಕ್, ಹಾಗೂ ವ್ಯಸನ ಮುಕ್ತ ಕೇಂದ್ರಗಳಲ್ಲಿ ಉದ್ಯೋಗ | 598.18 | 811.13 | 15552.56 | 21089.30 |
| 41 | ವಸತಿ ನಿಲಯಗಳು (ಹಾಸ್ಟೆಲ್‌ಗಳು), ಅತಿಥಿ ಗೃಹಗಳು, ಹೋಮ್ ಸ್ಟೇಗಳು, ಪೇಯಿಂಗ್ ಗೆಸ್ಟ್ ಸಂಸ್ಥೆಗಳು, ಸರ್ವೀಸ್ಡ್ ಅಪಾರ್ಟ್‌ಮೆಂಟ್‌ಗಳು, ರೆಸಿಡೆಂಟ್ಸ್ ಅಸೋಸಿಯೇಷನ್, ಮದುವೆ ಹಾಗೂ ಸಮುದಾಯ ಭವನಗಳಲ್ಲಿ ಉದ್ಯೋಗ | 565.05 | 785.01 | 14691.32 | 20410.25 |
| 42 | ಹೋಟೆಲ್ / ವಸತಿ ಸಹಿತ ಹೋಟೆಲ್‌ಗಳು, ರೆಸ್ಟೋರೆಂಟ್ ಮೋಟೆಲ್‌ಗಳು, ಲಾಡ್ಜ್‌ಗಳು, ಡಾಬಾಗಳು, ಕ್ಯಾಂಟೀನ್, ಹೊರಾಂಗಣ ಆಹಾರ ತಯಾರಿಕೆ ಹಾಗೂ ಸರಬರಾಜು (ಕೇಟರಿಂಗ್) ಮತ್ತು ಸಂಬಂಧಪಟ್ಟ ಸಂಸ್ಥೆಗಳಲ್ಲಿ ಉದ್ಯೋಗ | 519.22 | 752.91 | 13499.78 | 19575.74 |
| 43 | ಮಂಜುಗಡ್ಡೆ ಕಾರ್ಖಾನೆ (ಐಸ್ ಫ್ಯಾಕ್ಟರಿ) ಐಸ್ ಕ್ರೀಮ್ ಹಾಗೂ ಶೀತಲ ಸಂರಕ್ಷಣಾ ಸಂಸ್ಥೆಗಳಲ್ಲಿ ಉದ್ಯೋಗ. | 565.05 | 785.01 | 14691.32 | 20410.25 |
| 44 | ಖಂಡಸಾರಿ ಸಕ್ಕರೆ ಕಾರ್ಖಾನೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 45 | ಬಟ್ಟೆ ಒಗೆಯುವ, ಡ್ರೈಕ್ಲೀನ್ ಮತ್ತು ಲಾಂಡ್ರಿ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ | 519.22 | 739.60 | 13499.78 | 19229.68 |

| | | | | | |
|---|---|---|---|---|---|
| 46 | ಮದ್ಯ ತಯಾರಿಕಾ (ಡಿಸ್ಟಿಲರೀಸ್ ಹಾಗೂ ಬ್ರಿವರೀಸ್), ಬಾಟಲಿಂಗ್ ಹಾಗೂ ಪ್ಯಾಕಿಂಗ್ ಸಹಿತ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ | 565.05 | 774.76 | 14691.32 | 20143.79 |
| 47 | ಆಯುರ್ವೇದ, ಯೋಗ, ಯುನಾನಿ, ಸಿದ್ಧ ಹೋಮಿಯೋಪತಿ (ಆಯುಷ್) ಹಾಗೂ ಅಲೋಪಥಿಕ್ ಔಷಧಿಗಳ ತಯಾರಿಕೆಯಲ್ಲಿ ಉದ್ಯೋಗ. (ಉತ್ಪಾದನೆ, ವಿತರಣೆ ಜಾಹಿರಾತು ವಿಭಾಗಗಳ ಸಹಿತ) | 519.22 | 746.26 | 13499.78 | 19402.71 |
| 48 | ಅಕ್ಕಿ, ಭತ್ತ, ಜೋಳ ಅಥವಾ ಇನ್ನಿತರ ಧಾನ್ಯಗಳಿಂದ ಮಂಡಕ್ಕಿ, ಅವಲಕ್ಕಿ, ಚುರುಮುರಾ, ಮುರುಮುರಾ ಹಾಗೂ ಇತರೆ ಉತ್ಪನ್ನಗಳನ್ನು ತಯಾರಿಸುವ ಉದ್ದಿಮಗಳ ಕೆಲಸದಲ್ಲಿ ಉದ್ಯೋಗ | 543.22 | 697.50 | 14123.60 | 18134.87 |
| 49 | ಮೆಟಲ್ ರೋಲಿಂಗ್ ಅಂಡ್ ರೀರೋಲಿಂಗ್– [ಫೆರಸ್] ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 50 | ಮೆಟಲ್ ರೋಲಿಂಗ್ ಅಂಡ್ ರೀರೋಲಿಂಗ್ ಉದ್ದಿಮೆಗಳಲ್ಲಿ ಉದ್ಯೋಗ. [ನಾನ್–ಫೆರಸ್] | 543.22 | 751.42 | 14123.60 | 19537.00 |
| 51 | ಲಘು ಸಿಮೆಂಟ್ ಸ್ಥಾವರಗಳಲ್ಲಿ ಉದ್ಯೋಗ. | 565.05 | 767.42 | 14691.32 | 19952.80 |
| 52 | ಮೊಸಾಯಿಕ್ ಹಂಚುಗಳು, ಎಲ್ಲಾ ರೀತಿಯ ನೆಲ ಹಾಸು ಹಂಚುಗಳು, ಹೊಳಪಿನ ಹಂಚುಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 53 | ಎಣ್ಣೆ ಮಿಲ್‌ಗಳಲ್ಲಿ ಉದ್ಯೋಗ. | 565.05 | 764.51 | 14691.30 | 19877.32 |
| 54 | ಪೆಟ್ರೋಲ್, ಡೀಸೆಲ್ ಆಯಿಲ್ ಮತ್ತು ಎಲ್.ಪಿ.ಜಿ. ಪಂಪ್‌ಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |

| | | | | | |
|---|---|---|---|---|---|
| 55 | ಪ್ಲಾಸ್ಟಿಕ್, ಪಾಲಿ ಪ್ಲಾಸ್ಟಿಕ್, ರಬ್ಬರ್, ಪಿವಿಸಿ ಪೈಪ್ಸ್ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 566.70 | 775.09 | 14734.16 | 20152.28 |
| 56 | ಮುದ್ರಣ ಹಾಗೂ ಪ್ರಸರಣಾ ಉದ್ದಿಮೆಗಳಲ್ಲಿ ಉದ್ಯೋಗ | 565.05 | 777.69 | 14691.32 | 20219.92 |
| 57 | ಖಾಸಗಿ ವಿತ್ತ ನಿಗಮಗಳು, (ಫೈನಾನ್ಸ್ ಕಾರ್ಪೋರೇಷನ್) ಚಿಟ್ ಫಂಡ್‌ಗಳು ಹಾಗೂ ಕಾನೂನು ಬದ್ಧ ಬ್ಯಾಂಕಿಂಗ್ ರಹಿತ ನಗದು ವಹಿವಾಟು ಸಂಸ್ಥೆಗಳಲ್ಲಿ ಉದ್ಯೋಗ | 566.70 | 775.09 | 14734.16 | 20152.28 |
| 58 | ಶೌಚಾಲಯಗಳು, ಸ್ನಾನಗೃಹಗಳು, ಒಳಚರಂಡಿಗಳನ್ನು ಶುಚಿ ಮಾಡುವ (Scavenging) ಕೆಲಸಗಳಲ್ಲಿ ಉದ್ಯೋಗ. (ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹೊರತುಪಡಿಸಿ) | 740.63 | 840.28 | 19256.32 | 21847.30 |
| 59 | ಹಾಲು ಶೇಖರಣೆ, ಸಂಸ್ಕರಣೆ ಹಾಗೂ ವಿತರಣಾ ಪ್ರಕ್ರಿಯೆಯ ಉದ್ದಿಮೆಗಳಲ್ಲಿ ಉದ್ಯೋಗ | 565.05 | 774.76 | 14691.32 | 20143.79 |
| 60 | ಸಾರ್ವಜನಿಕ ಸಾರಿಗೆ ಸಂಸ್ಥೆಗಳ ಉದ್ದಿಮೆಗಳಲ್ಲಿ ಉದ್ಯೋಗ | 523.54 | 623.54 | 13612.00 | 16212.00 |
| 61 | ಕಾಗದ, ಪಲ್ಪ್ ಕಾಗದ, ರಟ್ಟಿನ ಹಲಗೆ (ಹಾರ್ಡ್‌ಬೋರ್ಡ್), ಹುಲ್ಲಿನ ಹಲಗೆ (ಸ್ಟ್ರಾ ಬೋರ್ಡ್) ಮತ್ತು ನ್ಯೂಸ್ ಪ್ರಿಂಟ್ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 62 | ಅಕ್ಕಿ ಧಾನ್ಯಗಳು ಮತ್ತು ಬೇಳೆ ಗಿರಣಿ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 63 | ರಬ್ಬರ್ ಉತ್ಪನ್ನಗಳು (ಫೋಮ್ ಮತ್ತು ಟಾಯರ್ ರಬ್ಬರ್ ಸಹಿತ) ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |

| | | | | | |
|---|---|---|---|---|---|
| 64 | ಔಷಧಿಗಳು, ಗೃಹಪಯೋಗಿ ವಸ್ತುಗಳ ವೃತ್ತಿಪರ ಪ್ರವರ್ತಕ ಮತ್ತು ಮಾರಾಟದಲ್ಲಿ ಉದ್ಯೋಗ | 519.22 | 739.60 | 13499.78 | 19229.68 |
| 65 | ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ. (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ). | 601.72 | 777.09 | 15644.76 | 20204.43 |
| 66 | ರೇಷ್ಮ ಘಟಕಗಳಲ್ಲಿ ಮತ್ತು ಪ್ರಕ್ರಿಯಗಳಲ್ಲಿ ಉದ್ಯೋಗ ಭಾಗ-1 | 543.22 | 697.50 | 14123.60 | 18134.87 |
| 67 | ರೇಷ್ಮೆ ಘಟಕಗಳಲ್ಲಿ ಮತ್ತು ಪ್ರಕ್ರಿಯೆಗಳಲ್ಲಿ ಉದ್ಯೋಗ ಭಾಗ-2 | 624.07 | 751.42 | 16225.70 | 19537.00 |
| 68 | ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 69 | ಸ್ಪಿನ್ನಿಂಗ್ ಮಿಲ್ ಉದ್ದಿಮೆಗಳಲ್ಲಿ ಉದ್ಯೋಗ | 493.42 | 530.52 | 12829.02 | 13793.43 |
| 70 | ಸ್ಪನ್ ಪೈಪುಗಳು, ಕಾಂಕ್ರೀಟ್ ಪೈಪುಗಳು, ಸಾನಿಟರಿ ಫಿಟ್ಟಿಂಗ್‌ಗಳು, ಪ್ಲೈನ್ ಸಿಮೆಂಟ್ ಕಾಂಕ್ರೀಟ್ (ಪಿ.ಸಿ.ಸಿ.) ಹಾಗೂ ರೀ-ಇನ್‌ಪೋರ್ಸ್‌ಡ್ ಸಿಮೆಂಟ್ ಕಾಂಕ್ರೀಟ್ (ಆರ್.ಸಿ.ಸಿ). ಪೈಪುಗಳು ಮತ್ತು ಕಂಬಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 519.22 | 752.91 | 13499.78 | 19575.74 |
| 71 | ಲೋಹದ ಅಲ್ಮೇರಾಗಳು, ಕುರ್ಚಿಗಳು, ಮೇಜುಗಳು ಹಾಗೂ ಇತರೆ ಪೀಠೋಪಕರಣಗಳನ್ನು ಉತ್ಪಾದಿಸುವ ಉದ್ದಿಮೆಗಳಲ್ಲಿ ಉದ್ಯೋಗ | 519.22 | 752.91 | 13499.78 | 19575.74 |
| 72 | ಕಲ್ಲು ಒಡೆಯುವುದು ಮತ್ತು ಕಲ್ಲು ಪುಡಿ ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 543.22 | 697.50 | 14123.60 | 18134.87 |

| | | | | | |
|---|---|---|---|---|---|
| 73 | ಬಟ್ಟೆಗಳ ತಯಾರಿಕೆ (ಗಾರ್ಮೆಂಟ್ಸ್), ವಸ್ತ್ರ ವಿನ್ಯಾಸ (ಕಾಸ್ಟ್ಯೂಮ್ಸ್) ಮತ್ತು ಟೈಲರಿಂಗ್ ಉದ್ದಿಮೆಗಳಲ್ಲಿ ಉದ್ಯೋಗ | 481.57 | 526.41 | 12520.74 | 13686.78 |
| 74 | ರೇಷ್ಮೆ ಬಟ್ಟೆಗಳ (ಸಿಲ್ಕ್) ಉದ್ದಿಮೆಗಳಲ್ಲಿ ಉದ್ಯೋಗ | 560.73 | 590.37 | 14579.02 | 15349.69 |
| 75 | ಹೆಂಚು ತಯಾರಿಕೆ ಉದ್ದಿಮೆಗಳಲ್ಲಿ ಉದ್ಯೋಗ | 543.22 | 697.50 | 14123.60 | 18134.87 |
| 76 | ಶೇಂದಿ ಇಳಿಸುವ ಉದ್ದಿಮೆಗಳಲ್ಲಿ ಉದ್ಯೋಗ | 543.22 | 697.50 | 14123.60 | 18134.87 |
| 77 | ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಉದ್ಯೋಗ | 603.55 | 799.01 | 15692.32 | 20774.32 |
| 78 | ಸಹಕಾರ ಸೊಸೈಟಿಗಳಲ್ಲಿ ಉದ್ಯೋಗ | 624.07 | 751.42 | 16225.70 | 19537.00 |
| 79 | ಚಿನ್ನ ಮತ್ತು ಬೆಳ್ಳಿ ಆಭರಣಗಳ ತಯಾರಿಕೆ ಮತ್ತು ಹರಳುಗಳು, ವಜ್ರಗಳನ್ನು ಕತ್ತರಿಸುವುದು, ಹೊಳಪು ಗೊಳಿಸುವ ಉದ್ದಿಮೆಗಳಲ್ಲಿ ಉದ್ಯೋಗ | 581.72 | 751.42 | 15124.60 | 19537.00 |
| 80 | ಬಟ್ಟೆಗಳಿಗೆ ಬಣ್ಣ ಹಾಕುವ (ಡೈ) ಮತ್ತು ಅಚ್ಚು ಹಾಕುವ (ಪ್ರಿಂಟ್) ಹಾಕುವ ಉದ್ದಿಮೆಗಳಲ್ಲಿ ಉದ್ಯೋಗ | 512.71 | 581.20 | 13330.53 | 15111.26 |
| 81 | ಸರಕು ಸಾಮಗ್ರಿಗಳ ಹೇರುವ ಮತ್ತು ಇಳಿಸುವ (ಲೋಡಿಂಗ್ ಮತ್ತು ಅನ್‌ಲೋಡಿಂಗ್) ಕೆಲಸಗಳಲ್ಲಿ ಉದ್ಯೋಗ | ತುಂಡು ಆಧಾರ | | | |